# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ

## ಸ್ಪೆಷಲ್ ಕೇಸ್ ನಂ. 3/2010

**ದೋ.ಸಾ. :118 ಫ್ರಾ.ಸಾ. : 49**

ಸಾಕ್ಷಿಯ ಹೆಸರು : ಲಕ್ಷ್ಮಣ ನಾಯ್ಕ
ತಂದೆಯ ಹೆಸರು : ಗಣಪತಿ ನಾಯ್ಕ
ವಯಸ್ಸು : 53 ವರ್ಷ
ಉದ್ಯೋಗ : ರೈತಾಪಿ
ವಾಸ : ಕಾನಗೋಡು, ಸಿದ್ದಾಪುರ.

**ದಿನಾಂಕಃ 16-11-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನನಗೆ ಆರೋಪಿ ಪರಿಚಯ ಇದೆ. ಆರೋಪಿ ಕಾನಗೋಡು ಗ್ರಾಮ ಪಂಚಾಯತಿ ಅಧ್ಯಕ್ಷರು ಆಗಿದ್ದರು. ನಾನು ಕಾನಗೋಡು ಗ್ರಾಮದಲ್ಲಿ ವಾಸ ಇದ್ದೇನೆ. ಅಲ್ಲಿ ನನಗೆ ಸ್ವಂತ ಮನೆ ಇದೆ. ನನ್ನ ಮನೆಗೆ ಶೌಚಾಲಯ ಇದೆ. ಅದನ್ನು ನನ್ನ ಸ್ವಂತ ಖರ್ಚಿನಲ್ಲಿ ನಿರ್ಮಾಣ ಮಾಡಿದ್ದೇನೆ. ನಮ್ಮ ಗ್ರಾಮ ಪಂಚಾಯತಿಯಲ್ಲಿ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ರೂ. 20 ಲಕ್ಷ ಅನ್ನು ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ಮಂಜೂರಿ ಮಾಡಿದ್ದರು ಎನ್ನುವುದು ನನಗೆ ಗೊತ್ತಿಲ್ಲ. ನಾನು ಅದರಲ್ಲಿ ಫಲಾನುಭವಿ ಆಗಿದ್ದೆ ಎನ್ನುವುದು ನನಗೆ ಗೊತ್ತಿಲ್ಲ. ನನಗೆ ರೂ. 3,000/- ಸಹಾಯ ಧನವನ್ನು ಕೊಟ್ಟಿಲ್ಲ. ನನಗೆ ಶೌಚಾಲಯವನ್ನು ಗ್ರಾಮ ಪಂಚಾಯತಿಯಿಂದ ನಿರ್ಮಾಣ ಮಾಡಿ ಕೊಟ್ಟಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದ**

2. ನಾನು ಗ್ರಾಮ ಪಂಚಾಯತಿಯಿಂದ ಸಹಾಯ ಧನ ಪಡೆದು ಶೌಚಾಲಯವನ್ನು ನಿರ್ಮಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಸಹಾಯ ಧನ ಪಡೆದಿದ್ದರೂ, ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ